# ಕರ್ನಾಟಕ ವಿಧಾನ ಪರಿಷತ್ತು
## ನೂರ ಮೂವತ್ತನೆಯ ಅಧಿವೇಶನ
## (ಮುಂದುವರೆದ ಉಪವೇಶನಗಳು)
## ಕಾರ್ಯಕಲಾಪಗಳ ಪಟ್ಟಿ
**ಸೋಮವಾರ, ದಿನಾಂಕ: 11ನೇ ಜುಲೈ, 2016**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

******

### 01. ನೂತನ ಸದಸ್ಯರ ಪ್ರಮಾಣ ವಚನ

### 02. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹದಿನೇಳನೆಯ ಪಟ್ಟಿ

ಆ) **<u>ತಡೆಹಿಡಿಯಲಾದ ಪ್ರಶ್ನೆ:</u>**
ಶ್ರೀ ವಿ. ಸೋಮಣ್ಣ, ಶ್ರೀಮತಿ ವಿಮಲಾಗೌಡ ಹಾಗೂ ಶ್ರೀ ಎಸ್.ವ್ಹಿ. ಸಂಕನೂರ ಇವರುಗಳ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 1545+1614+1598, ಪಟ್ಟಿ-13, ಸಮೂಹ-01 : **ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು**

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹದಿನೇಳನೆಯ ಪಟ್ಟಿ

### 03. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

(ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಒಂದನೇ ಹಾಗೂ ಎರಡನೇ ಪಟ್ಟಿಗಳ ರೀತ್ಯಾ.)

### 04. ವರದಿಗಳನ್ನೊಪ್ಪಿಸುವುದು

**ಶ್ರೀ ಎಸ್.ವ್ಹಿ. ಸಂಕನೂರ, (ಸದಸ್ಯರು, ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿ)** ಅವರು 2015-16ನೇ ಸಾಲಿನ ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಮೂವತ್ತೊಂದನೆಯ ವರದಿಯನ್ನು ಒಪ್ಪಿಸುವುದು.

**ಆ) ಶ್ರೀ ಆರ್. ಧರ್ಮಸೇನಾ, (ಸದಸ್ಯರು, ಕರ್ನಾಟಕ ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ)** ಅವರು ಕರ್ನಾಟಕ ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ 2015-16ನೇ ಸಾಲಿನ 14ನೇ ವಿಧಾನ ಸಭೆಯ ನಾಲ್ಕನೇ ವರದಿಯನ್ನು ಒಪ್ಪಿಸುವುದು.

..2

## ೦೫. ಗಮನ ಸೆಳೆಯುವ ಸೂಚನೆಗಳು

**ಅ) ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ಉಡುಪಿ ಮತ್ತು ಕುಂದಾಪುರ ತಾಲ್ಲೂಕುಗಳಿಗೆ ಶಾಶ್ವತ ಕುಡಿಯುವ ನೀರನ್ನು ಒದಗಿಸಲು ವರಾಹಿ ನೀರಾವರಿ ಯೋಜನೆಯ ಕಾಲುವೆಯನ್ನು ಉಡುಪಿ ತಾಲ್ಲೂಕಿನ ಹೆಜಮಾಡಿಯವರೆಗೂ ಮುಂದುವರೆಸಿ, ಕೆರೆಗಳನ್ನು ತುಂಬಿಸುವ ಯೋಜನೆ ಬಗ್ಗೆ **ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ** ಗಮನ ಸೆಳೆಯುವುದು.

**ಆ) ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ (ಅಣ್ಣಯ್ಯ)** ಅವರು ತುಮಕೂರು ಜಿಲ್ಲೆ, ತುರುವೇಕೆರೆ ತಾಲ್ಲೂಕು, ದಬ್ಬೆಗಟ್ಟ ಹೋಬಳಿ, ಅಬಲಕಟ್ಟೆ ಎಸ್.ಸಿ. ಕಾಲೋನಿಯ ನಾಗರೀಕರು ಹಾಗೂ ಇತರರಿಗೆ ಸಾರ್ವಜನಿಕ ರಸ್ತೆ ಇಲ್ಲದೆ ತೊಂದರೆಯಾಗುತ್ತಿರುವುದರಿಂದ ಹಾಲಿ ನಕಾಶೆದಾರಿಯಲ್ಲಿ "One time development" ಯೋಜನೆಯಡಿಯಲ್ಲಿ ರಸ್ತೆ ಮಂಜೂರಾತಿ ಬಗ್ಗೆ **ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ** ಗಮನ ಸೆಳೆಯುವುದು.

## ೦೬. ನಿಯಮ ೩೩೦ರ ಮೇರೆಗೆ

**ಅ) ಶ್ರೀ ರಾಮಚಂದ್ರಗೌಡ** ಅವರು ಬೆಂಗಳೂರು ನಗರದ ಕೆಲವು ಕೆರೆಗಳಲ್ಲಿ ವಿಷಯುಕ್ತ ಹಾಗೂ ಹಾನಿಕಾರಕವಾದ ನೊರೆ ಸಮಸ್ಯೆಯಿಂದಾಗಿ ಲಕ್ಷಾಂತರ ಮೀನುಗಳು ಸಾವನ್ನಪ್ಪಿದ್ದು ಹಾಗೂ ಕೆರೆಗಳ ಸುತ್ತಮುತ್ತಲಿನ ಸಾರ್ವಜನಿಕರ ಆರೋಗ್ಯಕ್ಕೆ ದುಷ್ಪರಿಣಾಮವುಂಟಾಗುತ್ತಿರುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು)**

**ಆ) ಶ್ರೀ ಪುಟ್ಟಣ್ಣ** ಅವರು ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ೧೯೯೩-೯೪ ಮತ್ತು ೧೯೯೪-೯೫ರಲ್ಲಿ ಸೇವೆ ಸಲ್ಲಿಸಿ, ಶೇ ೫೫% ಕ್ಕಿಂತ ಕಡಿಮೆ ಅಂಕ ಪಡೆದ ಅರೆಕಾಲಿಕ ಉಪನ್ಯಾಸಕರಗಳ ಸೇವಾ ಸಕ್ರಮಾತಿ ಮಾಡುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಉನ್ನತ ಶಿಕ್ಷಣ ಸಚಿವರು)**

**ಶ್ರೀನಿವಾಸ**
**ಕಾರ್ಯದರ್ಶಿ(ಪ್ರ)**

---